ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1377
ಉತ್ತರಿಸಬೇಕಾದ ದಿನಾಂಕ : 24.12.2021
ಸದಸ್ಯರ ಹೆಸರು : ಶ್ರೀಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ಸಚಿವರು : ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಜಾರಿಯಲ್ಲಿರುವ ಯೋಜನೆಗಳ (ವಿವರ ನೀಡುವುದು) ಸದರಿ ಯೋಜನೆಗಳ ಮಾರ್ಗಸೂಚಿಗಳನ್ನು ಒದಗಿಸುವುದು:	ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ:- **ನಗದು ಪುರಸ್ಕಾರ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ. **ಏಕಲವ್ಯ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ ನೀಡಲಾಗುತ್ತಿದೆ. **ಜೀವಮಾನ ಸಾಧನೆ ಪ್ರಶಸ್ತಿ** : ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ರಾಜ್ಯದ ತರಬೇತುದಾರರಿಗೆ ಅವರ ಜೀವಮಾನ ಸಾಧನೆಗೆ ಪ್ರಶಸ್ತಿ ನೀಡಲಾಗುತ್ತಿದೆ. **ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ:** ದೇಸೀ ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ರಾಜ್ಯದ ಗ್ರಾಮೀಣ ಕ್ರೀಡಾಪ್ರತಿಭೆಗಳಿಗೆ ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ ಹಾಗೂ ನಗದನ್ನು ನೀಡಿ ಗೌರವಿಸಲಾಗುತ್ತಿದೆ. **ಶೈಕ್ಷಣಿಕ ಶುಲ್ಕ ಮರುಪಾವತಿ** : ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರು ಪಾವತಿ ಮಾಡಲಾಗುತ್ತಿದೆ. **ಕ್ರೀಡಾ ವಿದ್ಯಾರ್ಥಿ ವೇತನ**: ರಾಜ್ಯ ಮಟ್ಟದಲ್ಲಿ ಪದಕ ವಿಜೇತರಾಗಿ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ಗಳ ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ಉಪಯೋಜನೆಯಲ್ಲಿ ಅಂತಾರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ಕ್ರಮವಾಗಿ ತಲಾ ರೂ.5.00, 3.00 ಮತ್ತು ರೂ.1.00 ಲಕ್ಷಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.

ಅಂತಾರಾಷ್ಟ್ರೀಯ/ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ